148ನೇ ಅಧಿವೇಶನ

ನಿಯಮ -72

ಕ್ರ- 121 - ಲಂಬಾಣಿ

# ಶ್ರೀ ಪ್ರಕಾಶ್ ಕೆ ರಾಠೋಡ್, ಮಾನ್ಯ ವಿಧಾನಸಭಾ ಸದಸ್ಯರು, ಇವರು ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ

**ವಿಷಯ:** ರಾಜ್ಯದಲ್ಲಿ 2020-21 ನೇ ಸಾಲಿನಿಂದ ಸರ್ಕಾರಿ ಶಾಲೆಗಳು ಏರುಗತಿಯಲ್ಲಿ ಮುಚ್ಚಲ್ಪಡುತ್ತಿರುವುದು ತುಂಬಾ ಕಳವಳದ ವಿಷಯವಾಗಿದೆ. ಶಾಲೆಗಳಿಗೆ ಪ್ರವೇಶಾತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಇಳಿಮುಖವಾಗಿದೆ. ಪ್ರಸ್ತುತವಿರುವ ಸರ್ಕಾರಿ ಶಾಲೆಗಳಲ್ಲಿ ಗಣಕಯಂತ್ರಗಳು, ಇಂಟರ್ನೆಟ್ ಸೌಲಭ್ಯ, ಶೌಚಾಲಯಗಳ ಲಭ್ಯತೆ ರಾಂಪ್ಸ್ ಮತ್ತು ರೈಲಿಂಗ್ಸ್‌ನಂತಹ ಮೂಲಭೂತ ಸೌಲಭ್ಯಗಳಿಲ್ಲದಿರುವುದರಿಂದ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವಿಲ್ಲದಿರುವುದರಿಂದ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಇಳಿಮುಖವಾಗಿರುವ ಕುರಿತು

---

ಪ್ರಸ್ತುತ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಸಲುವಾಗಿ ಹಾಗೂ ಪ್ರವೇಶಾತಿ ಹೊಂದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಾಲಕಾಲಕ್ಕೆ ಒದಗಿಸಲಾಗುತ್ತಿದೆ. ಈ ನಿಟ್ಟಿನಲ್ಲಿ 2020-21 ರಿಂದ 2022-23 ನೇ ಸಾಲಿನವರೆಗೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಈ ಕೆಳಕಂಡಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ:

| ಕ್ರ ಸಂ | ಶಾಲೆಗಳ ವಿವರ | ಒಟ್ಟು ಶಾಲೆಗಳ ಸಂಖ್ಯೆ | ರಾಂಪ್ಸ್ ಒದಗಿಸ ಲಾದ ಶಾಲೆಗಳ ಸಂಖ್ಯೆ | ರೈಲಿಂಗ್ಸ್ ಒದಗಿಸ ಲಾದ ಶಾಲೆಗಳ ಸಂಖ್ಯೆ | ಇಂಟರ್‌ನೆಟ್ ಸೌಲಭ್ಯ ಒದಗಿಸಲಾದ ಶಾಲೆಗಳ ಸಂಖ್ಯೆ | ಕಂಪ್ಯೂಟರ್ ಸೌಲಭ್ಯ ಒದಗಿಸಲಾದ ಶಾಲೆಗಳ ಸಂಖ್ಯೆ | ಮಕ್ಕಳಿಗೆ ಲ್ಯಾಪ್ ಟಾಪ್ ಸೌಲಭ್ಯ ಒದಗಿಸಿರುವ ಶಾಲೆಗಳ ಸಂಖ್ಯೆ |
|---|---|---|---|---|---|---|---|
| 1 | ಪ್ರಾಥಮಿಕ | 42239 | 35567 | 30821 | 5628 | 6884 | 2051 |
| 2 | ಪ್ರೌಢ | 4819 | 4088 | 3319 | 1424 | 3424 | 4111 |

ಉಳಿದ ಶಾಲೆಗಳಿಗೂ ಸಹ ಇಲಾಖೆ ಅಡಿಯಲ್ಲಿ ಲಭ್ಯವಿರುವ ಅನುದಾನಕ್ಕೆ ಅನುಗುಣವಾಗಿ ಅಗತ್ಯವಿರುವ ಸೌಲಭ್ಯಗಳನ್ನು ಕಾಲಕಾಲಕ್ಕೆ ಒದಗಿಸಲು ಕ್ರಮವಹಿಸಲಾಗುತ್ತಿದೆ.

2020-21 ಮತ್ತು 2021-22 ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಇಲಾಖಾ ಅನುದಾನ ಒಟ್ಟುಗೂಡಿಸುವಿಕೆಯೊಂದಿಗೆ, ರಾಜ್ಯವಾರು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶೌಚಾಲಯ ನಿರ್ಮಾಣ, ದುರಸ್ತಿ ಮತ್ತು ಇತರೆ ಮೂಲಭೂತ ಸೌಲಭ್ಯಗಳ ಕಾಮಗಾರಿಗೆ ಕ್ರಮವಾಗಿ ರೂ. 1602.99 ಲಕ್ಷಗಳು, ರೂ.3500.00 ಲಕ್ಷಗಳು ಹಾಗೂ 2022-23ನೇ ಸಾಲಿಗೆ ಮಂಜೂರಾದ ರೂ.23450.00 ಲಕ್ಷಗಳ ಪೈಕಿ ರೂ.1750.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.

ರಾಜ್ಯದಲ್ಲಿನ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ನಿಟ್ಟಿನಲ್ಲಿ ಕೆಳಕಂಡಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ.

1) ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನಿಗಧಿಪಡಿಸಿರುವ ವಿದ್ಯಾರ್ಹತೆ ಹೊಂದಿರುವ ಅರ್ಹ ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡು ಗುಣಮಟ್ಟದ ಶಿಕ್ಷಣ ನೀಡಲು ಕ್ರಮವಹಿಸಲಾಗಿದೆ.
2) ಪ್ರಸ್ತುತ 6 ರಿಂದ 8ನೇ ತರಗತಿಗೆ ಬೋಧಿಸಲು 15000 ಜಿಪಿಟಿ ಶಿಕ್ಷಕರ ನೇಮಕ ಮಾಡಿಕೊಳ್ಳಲು ಕ್ರಮವಹಿಸಲಾಗಿದೆ.

3) ಮಕ್ಕಳ ಬೋಧನೆಗೆ ಕೊರತೆಯಾಗದಂತೆ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳೆದುರಾಗಿ 27000 ಅತಿಥಿ ಶಿಕ್ಷಕರನ್ನು ಮತ್ತು ಪ್ರೌಢಶಾಲೆಗಳಲ್ಲಿನ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಎದುರಾಗಿ 5078 ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡು ಮಕ್ಕಳ ಬೋಧನೆಗೆ ಕ್ರಮಹಿಸಲಾಗಿದೆ.

4) 2022-23ನೇ ಸಾಲಿನಲ್ಲಿ ಕಲಿಕಾ ಚೇತರಿಕೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿ ಎಲ್ಲಾ ಶಿಕ್ಷಕರಿಗೆ ತರಬೇತಿ ನೀಡಲಾಗಿದೆ.

5) 2021-22ನೇ ಸಾಲಿನಿಂದ 1 ರಿಂದ 10ನೇ ತರಗತಿಯನ್ನು ಬೋಧಿಸುತ್ತಿರುವ ಎಲ್ಲಾ ಶಿಕ್ಷಕರಿಗೆ ಆನ್ ಲೈನ್ ಮೂಲಕ ನಿಷ್ಠಾ 2.0 ತರಬೇತಿಯನ್ನು ನೀಡಲಾಗಿರುತ್ತದೆ.

6) ಶಿಕ್ಷಕರ ಅಗತ್ಯತೆ ಆಧರಿಸಿ ತರಬೇತಿ ನೀಡುವುದರೊಂದಿಗೆ ತಂತ್ರಜ್ಞಾನ ಆಧಾರಿತ ಕಲಿಕೆಗೆ ಒತ್ತು ನೀಡಲಾಗಿದೆ.

7) ಸರ್ಕಾರಿ ಶಾಲೆಗಳಲ್ಲಿ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಪ್ರೋತ್ಸಾಹಿಸಲಾಗಿದೆ.

8) ವಿದ್ಯಾವಿಕಾಸ ಯೋಜನೆಯಡಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಶೂ ಮತ್ತು ಸಾಕ್ಸ್ ಸೌಲಭ್ಯವನ್ನು ನೀಡಲಾಗಿದೆ.

9) ಮಧ್ಯಾಹ್ನ ಉಪಹಾರ ಯೋಜನೆ ಅಡಿಯಲ್ಲಿ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬಿಸಿಯೂಟ ಮತ್ತು ಕ್ಷೀರಭಾಗ್ಯ ಯೋಜನೆ ಅಡಿಯಲ್ಲಿ ಬಿಸಿ ಹಾಲು ನೀಡಲಾಗುತ್ತಿದೆ.

10) ಮಕ್ಕಳ ಪ್ರತಿಭಾ ಕಾರಂಜಿ, ಕರ್ನಾಟಕ ದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ವಿವಿಧ ಚಟುವಟಿಕೆಗಳನ್ನು ಆಯೋಜನೆ ಮಾಡುವುದರೊಂದಿಗೆ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ ಕ್ರಮವಹಿಸಲಾಗಿದೆ.

11) ಶಾಲೆಯಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಯ ನಿಗಧಿತ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿದೆ.

12) ಎಸ್.ಎ.ಟಿ.ಎಸ್ ತಂತ್ರಾಂಶದ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ, ಅಗತ್ಯ ಪ್ರೋತ್ಸಾಹದಾಯಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

13) ಕೋವಿಡ್-19 ಹಿನ್ನಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಮುಖ್ಯವಾಹಿನಿಗೆ ಕರೆತರುವ ಕಾರ್ಯ ನಿರಂತರವಾಗಿ ಜಾರಿಯಲ್ಲಿದೆ.

14) ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಮಕ್ಕಳ ರಕ್ಷಣೆ ಸಂಬಂಧ ಪೋಕ್ಸೋ ಆಕ್ಟ್ 2012, ಮಕ್ಕಳ ರಕ್ಷಣಾ ನೀತಿ 2016 ಮತ್ತು ಕರ್ನಾಟಕ ರಾಜ್ಯ ಮಕ್ಕಳ ಆಯೋಗದ ಎಸ್.ಒ.ಪಿ. ಮತ್ತು ಮಾರ್ಗಸೂಚಿಯಂತೆ ಮಕ್ಕಳ ಹಕ್ಕುಗಳ ರಕ್ಷಣೆ ಸಂಬಂಧ ಕ್ರಮವಹಿಸಲು ರಾಜ್ಯದ ಎಲ್ಲಾ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.

ರಾಜ್ಯದಲ್ಲಿರುವ ಎಲ್ಲಾ ಶಾಲೆಗಳಿಗೂ ಸಹ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಹೆಚ್ಚಿಸಲು ಅಗತ್ಯ ಕ್ರಮಕೈಗೊಳ್ಳಲಾಗುತ್ತಿದ್ದು, ರಾಜ್ಯದಲ್ಲಿ 2020-21ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೆ ಯಾವುದೇ ಸರ್ಕಾರಿ ಶಾಲೆಗಳನ್ನು ಮುಚ್ಚಿರುವುದಿಲ್ಲವೆಂಬ ಅಂಶವನ್ನು ಮಾನ್ಯ ಸದನದ ಗಮನಕ್ಕೆ ತರಬಯಸುತ್ತೇನೆ.

**ಇಪಿ 390 ಯೋಸಕ 2022**

**(ಬಿ.ಸಿ ನಾಗೇಶ್)**
**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ**
**ಹಾಗೂ ಸಕಾಲ ಸಚಿವರು**